ಕರ್ನಾಟಕಸರ್ಕಾರ

(ಕಂದಾಯಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಕಭೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾಕಹೊ/26/2013-14. ದಿನಾಂಕ:29-08-2016.

| ವಾದಿಗಳು | ಪ್ರತಿವಾದಿಗಳು |
|---|---|
| ಕೆ.ಜಯಣ್ಣ ತಂದೆ ಲೇಟ್ ಕೆ.ಲಿಂಗಪ್ಪ<br>ಬಣವಿಕಲ್ಲು ಗ್ರಾಮ<br>ಕೂಡ್ಲಿಗಿ ತಾಲೂಕು | ಮಹಾದೇವಕ್ಕ ಗಂಡ ಲೇಟ್ ಶರಣಪ್ಪ<br>ಬಣವಿಕಲ್ಲು ಗ್ರಾಮ<br>ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಬಣವಿಕಲ್ಲು ಗ್ರಾಮದ ಸನಂ 173. ವಿಸ್ತೀರ್ಣ 3-77. ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಬಣವಿಕಲ್ಲು ಗ್ರಾಮದ ಸನಂ 173. ವಿಸ್ತೀರ್ಣ 3-77. ಎಕ್ರೆ ಜಮೀನನ್ನು ಸದರಿ ಗ್ರಾಮದ ಕೆ.ಜಯಣ್ಣ ತಂದೆ ಲೇಟ್ ಕೆ.ಲಿಂಗಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಬಣವಿಕಲ್ಲು ಇವರು ನಮೂನೆ-21 ನೋಟಿಸನ್ನು ದಿನಾಂಕ 07-06-2013. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಗ್ರಾಮದ ಮಹಾದೇವಕ್ಕ ಗಂಡ ಲೇಟ್ ಶರಣಪ್ಪ ಇವರು ನಮೂನೆ-21ಕ್ಕೆ ಸಹಿ ಮಾಡಲು ನಿರಾಕರಿಸಿರುವ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 31/2012-13. ದಿನಾಂಕ 07-07-2013. ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 28-11-2013 ರಿಂದ 29-08-2016 ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿದ್ದು ಮತ್ತು ತಕರಾರುದಾರರು ದಿನಾಂಕ 28-11-2013 ರಂದು ಹಾಜರಾಗಿದ್ದು ಉಳಿದ ವಿಚಾರಣೆಯಲ್ಲಿ ಗೈರುಹಾಜರಾಗಿರುತ್ತಾರೆ. ಅರ್ಜಿದಾರರು ಬಣವಿಕಲ್ಲು ಗ್ರಾಮದ ಸನಂ 173. ವಿಸ್ತೀರ್ಣ 3-77. ಎಕ್ರೆ ಜಮೀನು ನಮ್ಮ ತಾಯಿಯವರಾದ ಕೆ.ಕಲ್ಲಮ್ಮ ಗಂಡ ನಿಂಗಪ್ಪ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 08-11-2011 ರಂದು ಹಾಗೂ ನನ್ನ ಅಣ್ಣನಾದ ಶರಣಪ್ಪ ತಂದೆ ಲಿಂಗಪ್ಪ ಇವರು ಸಹಾ ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ನಮ್ಮಗಳ ಹೆಸರಲ್ಲಿ ಜಂಟಿಯಾಗಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರು ಹಾಜರಾಗಿದ್ದು ಸದರಿ ವಿವಾದಿತ ಜಮೀನು ನಾವು ಹೊಂದಾಣಿಕೆ ಮಾಡಬೇಕಾಗಿರುವುದರಿಂದ ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ನಮ್ಮ ತಕರಾರು ಇರುವುದಾಗಿ ಕೋರಿರುತ್ತಾರೆ.

ಮು.ತಿ.ನೊ-2

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹಾಜರಾಗಿದ್ದು ತಕರಾರುದಾರರು ವಿಚಾರಣೆಗೆ ಗೈರು ಹಾಜರಾಗಿರುವುದು ಕಂಡು ಬಂದ ಕಾರಣ ಅವರಿಗೆ ಆಸಕ್ತಿ ಇಲ್ಲವೆಂದು ಬಾವಿಸಿ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಬಣವಿಕಲ್ಲು ಗ್ರಾಮದ ಸನಂ 173. ವಿಸ್ತೀರ್ಣ 3-77. ಎಕ್ರೆ ಜಮೀನನ್ನು ಅರ್ಜಿದಾರರು ವಿಚಾರಣೆಗೆ ಗೈರು ಹಾಜರಾಗಿರುವುದರಿಂದ ಅವರಿಗೆ ಆಸಕ್ತಿ ಇಲ್ಲವೆಂದು ಬಾವಿಸಿ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 29-08-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಚೇರಿ ಹೊಸಹಳ್ಳಿ
[illegible]

ಇದರ ಪ್ರತಿಯನ್ನು:

1) ಅರ್ಜಿದಾರರಾದ ಕೆ.ಜಯಣ್ಣ ತಂದೆ ಲೇಟ್ ಕೆ.ಲಿಂಗಪ್ಪ ಬಣವಿಕಲ್ಲು ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಮಹಾದೇವಕ್ಕ ಗಂಡ ಶರಣಪ್ಪ ಬಣವಿಕಲ್ಲು ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.